# ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಸೇಡಂ.

## ಸಿ. ಸಿ. ನಂ.1223/2022

| | | | |
|---|---|---|---|
| ಹೆಸರು ಶ್ರೀ/ಶ್ರೀಮತಿ | ಅನೀಲ | ಸಿಡಬ್ಲ್ಯೂ-3 | ಪಿಡಬ್ಲ್ಯೂ-5 |
| ತಂದೆಯ/ಗಂಡನ ಹೆಸರು | ಭೀಮರಾಯ ಬೋವಿ | | |
| ವಯಸ್ಸು | 23 ವರ್ಷ | | |
| ಉದ್ಯೋಗ | ಚಾಲಕ | | |
| ವಾಸ ಸ್ಥಳ | ಮಳಖೇಡ | | |

ದಿನಾಂಕ 18-01-2024

ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ ಸಹಾಯಕ ಸರಕಾರಿ ಅಭಿಯೋಜಕರವರಿಂದ**

ಈಗ ತೋರಿಸುತ್ತಿರುವ ದಾಖಲೆಯ ಮೇಲಿರುವ ಸಹಿ ನನ್ನದೆ ಇರುತ್ತದೆ. ಸಾಕ್ಷಿ ಅಮಾನತ್ತುಪಡಿಸಿಕೊಂಡ ಮಾಲುಗಳ ಜ್ಞಾಪನಾ ಪತ್ರದ ಮೇಲಿರುವ ತಮ್ಮ ಸಹಿಯನ್ನು ಗುರುತಿಸುತ್ತಿದ್ದು, ಸದರಿ ಕಾಗದ ಪತ್ರವನ್ನು ನಿಪಿ-5 ಎಂದು, ಸಾಕ್ಷಿಯ ಸಹಿಯನ್ನು ನಿಪಿ-5(ಎ) ಎಂದು ಗುರುತಿಸಲಾಯಿತು. ನಿಪಿ-5 ಕ್ಕೆ ಪೊಲೀಸ್ ಠಾಣೆಯಲ್ಲಿ ಸಹಿ ಮಾಡಿರುತ್ತೇನೆ. ಅದರಲ್ಲಿ ಏನು ಬರೆದಿದ್ದಾರೆ ಎಂದು ಗೊತ್ತಿಲ್ಲ.

**(ಈ ಹಂತದಲ್ಲಿ ಸ.ಸ.ಅ.ರವರು ವಿನಂತಿಯ ಮೇರೆಗೆ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿಸಲಾಯಿತು.)**

**ಪಾಟೀ ಸವಾಲುಃ ಸಹಾಯಕ ಸರಕಾರಿ ಅಭಿಯೋಜಕರವರಿಂದ**

ದಿನಾಂಕ 11.10.2021 ರಂದು ಸಾಯಂಕಾಲ 07.30 ಗಂಟೆಗೆ ಸೇಡಂ-ಕಲಬುರಗಿ ರಸ್ತೆಯ ಮೇಲೆ ಒಬ್ಬ ಲಾರಿ ಚಾಲಕನು ಲಾರಿ ಹಾಗೂ ಅಕ್ಕಿಯನ್ನು ಬಿಟ್ಟು ಓಡಿ ಹೋಗಿದ್ದು ಆಗ ನಾನು ಸ್ಥಳದಲ್ಲಿ ಹಾಜರಿದ್ದು 50 ಕೆ.ಜಿ. ತೂಕದ 1248 ಪ್ಲಾಸ್ಟಿಕ್ ಚೀಲಗಳಲ್ಲಿ ತುಂಬಿದ ಅಕ್ಕಿ, ಲಾರಿ ನಂ. ಜಿಜೆ-36 ವ್ಹಿ-0723 ಹಾಗೂ ಲಾರಿ ನಂ.ಜಿಜೆ-36 ಟಿ-4732 ನೇದ್ದನ್ನು ನನ್ನ ಸಮಕ್ಷಮ ಜಪ್ತುಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಆಗ ನಿಪಿ-5 ರಂತೆ ಪಂಚನಾಮೆ ಬರೆದ ನಂತರ ನಾನು ಅದರ ವಿಷಯ ತಿಳಿದುಕೊಂಡು ನನ್ನ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ಆರೋಪಿಗೆ

ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ. ಹೇ. ಕೇ. ಸರಿ ಇದೆ.

ಸಹಿ/-

ಪ್ರ. ದ. ನ್ಯಾ ದಂ. ಸೇಡಂ.

# ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಸೇಡಂ.

## ಸಿ. ಸಿ. ನಂ.1223/2022

| | | | |
|---|---|---|---|
| ಹೆಸರು ಶ್ರೀ/ಶ್ರೀಮತಿ | ಶಿವರಾಜ | ಸಿಡಬ್ಲ್ಯೂ-10 | ಪಿಡಬ್ಲ್ಯೂ-6 |
| ತಂದೆಯ/ಗಂಡನ ಹೆಸರು | ಮಲ್ಲಪ್ಪ | | |
| ವಯಸ್ಸು | 34 ವರ್ಷ | | |
| ಉದ್ಯೋಗ | ಮುಖ್ಯ ಪೇದೆ, ಮಳಖೇಡ ಪೊಲೀಸ್ ಠಾಣೆ | | |
| ವಾಸ ಸ್ಥಳ | ಮಳಖೇಡ | | |

ದಿನಾಂಕ 18-01-2024

ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ ಸಹಾಯಕ ಸರಕಾರಿ ಅಭಿಯೋಜಕರವರಿಂದ**

ನಾನು ಕಳೆದ 4 ವರ್ಷಗಳಿಂದ ಮಳಖೇಡ ಪೊಲೀಸ್ ಠಾಣೆಯಲ್ಲಿ ಮುಖ್ಯ ಪೇದೆಯಾಗಿ ಸೇವೆ ಸಲ್ಲಿಸಿರುತ್ತೇನೆ. ದಿನಾಂಕ 29.10.2021 ರಂದು ನನಗೆ ಮತ್ತು ನನ್ನ ಸಹದ್ಯೋಗಿ ಬಲಾಕ್ರಿಷ್ಣ ರೆಡ್ಡಿ ಇವರಿಗೆ ಪಡಿತರ ಅಕ್ಕಿ ತುಂಬಿದ ಲಾರಿಗಳ ಕುರಿತು ಚಾಲಕರ ಮಾಹಿತಿ ಸಂಗ್ರಹಿಸುವುದು ಮತ್ತು ಅನುಮಾನಾಸ್ಪದ ವ್ಯಕ್ತಿಗಳ ಮಾಹಿತಿ ಸಂಗ್ರಹ ಕರ್ತವ್ಯ ನಿಯೋಜನೆ ಮಾಡಿದ್ದು ಇತ್ತು. ಆಗ ನಾವು ನಮ್ಮ ಮೇಲಾಧಿಕಾರಿಗಳ ಆದೇಶದಂತೆ ಕರ್ತವ್ಯ ನಿರ್ವಹಿಸುತ್ತಿದ್ದು ಆಗ ಸೇಡಂ ಬಸ್ ನಿಲ್ದಾಣಕ್ಕೆ ಹೋಗಿ ಕರ್ತವ್ಯ ನಿರ್ವಹಿಸುತ್ತಿರುವಾಗ ಇಬ್ಬರೂ ವ್ಯಕ್ತಿಗಳು ನಮ್ಮನ್ನು ನೋಡಿದ ತಕ್ಷಣ ಸ್ವಲ್ಪ ಕಸಿವಿಸಿಗೊಂಡಿದ್ದು ತಪ್ಪಿಸಿಕೊಳ್ಳಲು ಪ್ರಯತ್ನಿಸಿರುತ್ತಾರೆ. ಆಗ ನಾವು ಆ ಇಬ್ಬರೂ ವ್ಯಕ್ತಿಗಳನ್ನು ಹಿಡಿದು ಹೆಸರು ವಿಚಾರಿಸಿದ್ದು ಆಗ ಅವರು ತಮ್ಮ ಹೆಸರನ್ನು ಶಬ್ಬಿರ ಹಬೀಬ್ ಹಾಗೂ ಅಂಬರೀಶ ಪವಾರ ಅಂತಾ ಹೇಳಿರುತ್ತಾರೆ. ಈಗ ನ್ಯಾಯಾಲಯದ ಮುಂದೆ ಆ ವ್ಯಕ್ತಿಗಳು ಇದ್ದು ಅವರನ್ನು ಗುರುತಿಸುತ್ತೇನೆ. ನಂತರ ನಾವು ಮಳಖೇಡ ಪೊಲೀಸ್ ಠಾಣೆಗೆ ಹೋಗಿ ನಮ್ಮ ಮೇಲಾಧಿಕಾರಿಗಳಿಗೆ ವಿಷಯ ತಿಳಿಸಿ ವರದಿ ಬರೆದುಕೊಂಡು ಇಬ್ಬರೂ ವ್ಯಕ್ತಿಗಳನ್ನು ಠಾಣಾಧಿಕಾರಿಯವರ ಮುಂದೆ ಹಾಜರುಪಡಿಸಿರುತ್ತೇವೆ. ವರದಿಯನ್ನು ಈಗ ನೋಡುತ್ತಿದ್ದು ಅದನ್ನು ನಿಪಿ-6 ಎಂದು, ಸಾಕ್ಷಿಯ ಸಹಿಯನ್ನು ನಿಪಿ-6(ಎ) ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ ಶ್ರೀ ಬಿ. ಎಸ್. ಡಿ. ಆರೋಪಿತರ ಪರ ವಕೀಲರಿಂದ**

ನಾವು ಕರ್ತವ್ಯ ನಿರ್ವಹಿಸಬೇಕಾದ್ದಲ್ಲಿ ಠಾಣೆಯಲ್ಲಿ ಡೈರಿಯಲ್ಲಿ ನಮೂದು ಮಾಡುತ್ತೇವೆ

ಎಂದರೆ ಸರಿ. ಸದರಿ ಡೈರಿಯನ್ನು ನಮ್ಮ ಮೇಲಾಧಿಕಾರಿಯವರಿಗೆ ನಾನು ಸಲ್ಲಿಸಿಲ್ಲ. ನನಗೆ ದಿನಾಂಕ 29.11.2021 ರಂದು ಅನುಮಾನಾಸ್ಪದ ವ್ಯಕ್ತಿಗಳ ಶೋಧನೆ ಕುರಿತು ಮಾಹಿತಿ ಸಂಗ್ರಹಿಸಲು ಕರ್ತವ್ಯ ನಿಯೋಜನೆ ಮಾಡಲಾಗಿತ್ತು ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಅದರಂತೆ ನಾವು ಸೇಡಂ ಬಸ್ ನಿಲ್ದಾಣದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವುದಾಗಿ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಈಗ ನ್ಯಾಯಾಲಯದ ಮುಂದಿರುವ ಆರೋಪಿತರನ್ನು ಆ ದಿವಸ ನಮ್ಮನ್ನು ನೋಡಿ ಕಸಿವಿಸಿಗೊಂಡಿದ್ದರಿಂದ ಹಿಡಿದುಕೊಂಡಿರುವುದಾಗಿ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಹಾಗೇ ಆರೋಪಿತರನ್ನು ಹಿಡಿದುಕೊಂಡ ಬಗ್ಗೆ ನಮ್ಮ ಮೇಲಾಧಿಕಾರಿಯವರಿಗೆ ವರದಿ ಒಪ್ಪಿಸಿರುವುದಾಗಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ನಮ್ಮ ಮೇಲಾಧಿಕಾರಿಯವರ ಮಾತುಕೇಳಿ ಕರ್ತವ್ಯ ನಿರ್ವಹಿಸಿರುವುದಾಗಿ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ. ಹೇ. ಕೇ. ಸರಿ ಇದೆ.

ಸಹಿ/-

ಪ್ರ. ದ. ನ್ಯಾ ದಂ. ಸೇಡಂ.